ರಾಜ್ಯದ ಖಾಸಗಿ ಇಂಜನೀಯರಿಂಗ್ ಮತ್ತಿತರ ವೃತ್ತಿ ಶಿಕ್ಷಣ ಕಾಲೇಜುಗಳಲ್ಲಿ ಪ್ರವೇಶದ ನೀತಿ

1013 (1862): ಶ್ರೀ ಪಿ.ಜಿ.ಆರ್. ಸಿಂಧ್ಯಾ (ಕನಕಪುರ):–

ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

1) ಇತ್ತೀಚಿನ ಸುಪ್ರೀಮ್ ಕೋರ್ಟಿನ ತೀರ್ಪಿನ ಹಿನ್ನೆಲೆಯಲ್ಲಿ ರಾಜ್ಯದಲ್ಲಿರುವ ಖಾಸಗಿ ಇಂಜಿನಿಯರಿಂಗ್ ಮತ್ತಿತರ ವೃತ್ತಿ ಶಿಕ್ಷಣ ಕಾಲೇಜುಗಳ ಪ್ರವೇಶದ ಬಗ್ಗೆ ಸರ್ಕಾರದವರ ನೀತಿಯೇನು;

2) ಈ ಹಿನ್ನೆಲೆಯಲ್ಲಿ ಖಾಸಗಿ ಕಾಲೇಜುಗಳ ಆಡಳಿತ ಮಂಡಳಿಯ ಸಭೆಯನ್ನು ಕರೆಯಲಾಗಿದೆಯೆ;

3) ಈ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನಗಳೇನು ?

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಸಚಿವರು):–

1) ಶ್ರೀ ಉನ್ನಿಕೃಷ್ಣನ್‌ರವರು ಹೂಡಿದ್ದ ರಿಟ್ ಅರ್ಜಿಯ ಮೇಲೆ ಸರ್ವೋಚ್ಚ ನ್ಯಾಯಾಲಯವು ಇತ್ತೀಚಿನ ತನ್ನ ತೀರ್ಪಿನಲ್ಲಿ ನೀಡಿರುವ ಆದೇಶದ ಹಿನ್ನೆಲೆಯಲ್ಲಿ ಖಾಸಗಿ ಇಂಜಿನಿಯರಿಂಗ್ ಹಾಗೂ ಇತರ ವೃತ್ತಿ ಶಿಕ್ಷಣ ಕಾಲೇಜುಗಳಿಗೆ ವಿದ್ಯಾರ್ಥಿಗಳ ಪ್ರವೇಶದ ಬಗ್ಗೆ ನಿಯಮಾವಳಿಗಳನ್ನು ರೂಪಿಸಲಾಗಿದೆ. ಸದರಿ ನಿಯಮಾವಳಿಗಳು ಸದ್ಯದಲ್ಲೇ ಜಾರಿಗೆ ಬರಲಿವೆ.

2) ಹೌದು.

3) ಈ ಸಭೆಯಲ್ಲಿ ಆಡಳಿತ ಮಂಡಳಿಗಳ ಅಭಿಪ್ರಾಯಗಳನ್ನು ಪಡೆಯಲಾಯಿತು.

ಬೆಂಗಳೂರು ಸಂಜಯಗಾಂಧಿ ಆಸ್ಪತ್ರೆಯಲ್ಲಿ ಮೀಸಲಾತಿ ಅನುಸರಿಸಿರುವ ಬಗ್ಗೆ

1015 (967): ಶ್ರೀ ಬಿ.ಹೆಚ್. ಲಕ್ಷ್ಮಣಯ್ಯ (ಬೇಲೂರು):–

ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರು ನಗರದ ಸಂಜಯಗಾಂಧಿ ಆಸ್ಪತ್ರೆಯಲ್ಲಿ ಸರ್ಕಾರದ ನೇಮಕಾತಿ ಹಾಗೂ ಮೀಸಲಾತಿ ನಿಯಮಗಳನ್ನು ಉಲ್ಲಂಘಿಸಿ ನೇಮಕಾತಿ ನಡೆದಿರುವುದು ನಿಜವೇ;

ಆ) ಕಳೆದ ವರ್ಷದಿಂದ ಈ ಆಸ್ಪತ್ರೆಯಲ್ಲಿ ನೇಮಕ ಮಾಡಲಾಗಿರುವ ಸಿಬ್ಬಂದಿ ಸಂಖ್ಯೆ ಎಷ್ಟು ಅದರ ಪೈಕಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರ ಸಂಖ್ಯೆ ಎಷ್ಟು ಹಾಗೂ ವಯೋಮಿತಿ ಮೀರಿದವರನ್ನು ನೇಮಕಾತಿ ಮಾಡಿಕೊಂಡಿರುವುದು ನಿಜವೇ;

ಇ) ಸರ್ಕಾರಿ ನೇಮಕಾತಿ ನಿಯಮ ಹಾಗೂ ಮೀಸಲಾತಿ ನಿಯಮ ಉಲ್ಲಂಘಿಸಿದವರ ಮೇಲೆ ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು ?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು):–

ಅ) ಸಂಚಿತ ವೇತನದ ಮೇಲೆ ಇಬ್ಬರು ಕೋರ್ಸ್ ಕೋ ಆರ್ಡಿನೇಟರ್‌ಗಳನ್ನು ನೇಮಿಸಲಾಗಿತ್ತು. ಇವರ ಸೇವೆಯನ್ನು ದಿ: 25-9-1991ರಂದು ನಡೆದ ಗೌರ್ನಿಂಗ್ ಸಭೆಯಲ್ಲಿ ಕೋರ್ಸ್ – ಕೋ – ಆರ್ಡಿನೇಟರ್ ಹುದ್ದೆಯನ್ನು ಸೃಷ್ಟಿಸಿ ಕ್ರಮಬದ್ಧಗೊಳಿಸಲಾಯಿತು.

ಆ) ಒಟ್ಟು ನೇಮಕಾತಿಯ ಸಂಖ್ಯೆ 19